MARCH 10,2025
ALL INDIA RADIO- DHARWAD
PRADESH SAMACHARA (KANNADA) 12PM

<><><>

ಆಕಾಶವಾಣಿ

ಪ್ರದೇಶ ಸಮಾಚಾರ

ಓದಿದವವರು: ವಿವೇಕಾದಿತ್ಯ ಕನಿಯಾಲ

<><><>

ಬಿ.ಆರ್.ಅಂಬೇಡ್ಕರ್, ಡಿ.ವಿ. ಗುಂಡಪ್ಪ, ಪಿ.ರಾಮಯ್ಯ, ಪಾಟೀಲ ಪುಟ್ಟಪ್ಪ ಸೇರಿ, ಒಟ್ಟು 24 ಮಹನೀಯರ ಹೆಸರಿನಲ್ಲಿ, ದತ್ತಿ ನಿಧಿ ಪ್ರಶಸ್ತಿಗಳನ್ನು, ಸಾಧಕ ಪತ್ರಕರ್ತರಿಗೆ ನೀಡಿ, ಗೌರವಿಸಲಾಗುತ್ತಿದೆ ಎಂದು, ಮುಖ್ಯಮಂತ್ರಿಯವರ ಮಾಧ್ಯಮ ಸಲಹೆಗಾರ ಕೆ.ವಿ. ಪ್ರಭಾಕರ್ ಹೇಳಿದ್ದಾರೆ. ರಾಜ್ಯ ಕಾರ್ಯನಿರತ ಪತ್ರಕರ್ತರ ಸಂಘ, ಕೊಪ್ಪಳದಲ್ಲಿ ಆಯೋಜಿಸಿದ್ದ, ದತ್ತಿ ನಿಧಿ ಪ್ರಶಸ್ತಿ ಪ್ರದಾನ ಸಮಾರಂಭದಲ್ಲಿ, ಮುಖ್ಯ ಅತಿಥಿಯಾಗಿ ಪಾಲ್ಗೊಂಡು, ಮಾತನಾಡಿದರು. ಮಹನೀಯ ಪತ್ರಕರ್ತರುಗಳ ಹೆಸರು, ಕೇವಲ ದತ್ತಿ ನಿಧಿಗೆ ಮಾತ್ರ ಸೀಮಿತವಾಗಿ, ಅವರ ನಿಷ್ಠುರ ವೃತ್ತಿಪರತೆ, ರಾಜಿ ರಹಿತ ನೈಜ ಕಾಳಜಿ, ಮೌಲ್ಯಗಳು, ಸಮಷ್ಟಿ ಹಿತದಲ್ಲಿ ಮುನ್ನೆಲೆಗೆ ಬರಬೇಕು ಎಂದರು.

<><><>

ಹುಬ್ಬಳ್ಳಿಯ ನಿನಾದ ತಬಲಾ ವಿದ್ಯಾಲಯದ ವಿದ್ಯಾರ್ಥಿ, ಆಂಜನೇಯ ಭಜಂತ್ರಿ ಅವರು, ಉತ್ತರ ಪ್ರದೇಶದ ನೊಯಿಡಾದ ಅಮೇಠಿ ವಿಶ್ವವಿದ್ಯಾಲಯದಲ್ಲಿ ಆಯೋಜಿತ, ರಾಷ್ಟ್ರಮಟ್ಟದ ಯುವಜನೋತ್ಸವದ ತಬಲಾ ಸ್ಪರ್ಧೆಯಲ್ಲಿ ತೃತೀಯ ಸ್ಥಾನ ಪಡೆದಿದ್ದಾರೆ. ಕರ್ನಾಟಕ ವಿಶ್ವವಿದ್ಯಾಲಯ ಪ್ರತಿನಿಧಿಸಿದ್ದ ಅವರು, ಪ್ರದೇಶ ಸಮಾಚಾರದೊಂದಿಗೆ ತಮ್ಮ ಸಂತಸ ಹಂಚಿಕೊಂಡಿದ್ದಾರೆ.

<><><>

ಬೈಟ್: ಆಂಜನೇಯ ಭಜಂತ್ರಿ 32 ಸೆಕೆಂದುಗಳು

<><><>

ದುಬೈ ಅಂತಾರಾಷ್ಟ್ರೀಯ ಕ್ರೀಡಾಂಗಣದಲ್ಲಿ ಜರುಗಿದ, ಐ.ಸಿ.ಸಿ ಚಾಂಪಿಯನ್ಸ್ ಟ್ರೋಫಿ–2025 ಕ್ರಿಕೆಟ್ ಪಂದ್ಯಾವಳಿಯಲ್ಲಿ ನ್ಯೂಜಿಲೆಂಡ್ ತಂಡವನ್ನು ಮಣಿಸಿದ ಭಾರತ ತಂಡದ ಆಟಗಾರರನ್ನು ಮುಖ್ಯಮಂತ್ರಿ ಸಿದ್ದರಾಮಯ್ಯ ಅವರು ಅಭಿನಂದಿಸಿದ್ದಾರೆ. ತಮ್ಮ ಎಕ್ಸ್ ಖಾತೆಯಲ್ಲಿ ಮೆಚ್ಚುಗೆ ವ್ಯಕ್ತಪಡಿಸಿರುವ ಅವರು, ಬೌಲಿಂಗ್, ಬ್ಯಾಟಿಂಗ್, ಕ್ಷೇತ್ರರಕ್ಷಣೆ ವಿಭಾಗಗಳಲ್ಲಿ ಭಾರತ ತಂಡದ ಆಟ ಹುಬ್ಬೇರಿಸುವಂತಿತ್ತು. ತಂಡದ ಗೆಲುವಿನಲ್ಲಿ ಪ್ರಮುಖ ಪಾತ್ರವಹಿಸಿದ ಕನ್ನಡಿಗ ಕೆ.ಎಲ್ ರಾಹುಲ್ ಅವರ ಆಟ ಹೆಚ್ಚು ಖುಷಿ ಕೊಟ್ಟಿದೆ ಎಂದಿದ್ದಾರೆ.

<><><>

ಇಂದು ಪದ್ಮವಿಭೂಷಣ, ಡಾಕ್ಟರ ಯು.ಆರ್.ರಾವ್ ಎಂದೇ ಚಿರಪರಿಚಿತರಾಗಿದ್ದ, ಬಾಹ್ಯಾಕಾಶ ವಿಜ್ಞಾನಿ ಉಡುಪಿ ರಾಮಚಂದ್ರರಾವ್ ಅವರ ಜನ್ಮ ಜಯಂತಿ. ಈ ದಿನದಂದು ಯು.ಆರ್ ರಾವ್, ಅವರ ಕೊಡುಗೆಗಳನ್ನು ಸ್ಮರಿಸಿರುವ, ಕೇಂದ್ರ ನವ ಮತ್ತು ನವೀಕರಿಸಬಹುದಾದ ಇಂಧನಗಳ ಖಾತೆ ಸಚಿವ ಪ್ರಲ್ಹಾದ್ ಜೋಶಿ ಅವರು, 'ಭಾರತೀಯ ಬಾಹ್ಯಾಕಾಶ ಸಂಶೋಧನಾ ಸಂಸ್ಥೆ' (ಇಸ್ರೋ) ಮುಖ್ಯಸ್ಥರಾಗಿ ಸೇವೆ ಸಲ್ಲಿಸಿದ ಯು.ಆರ್ ರಾವ್ ಅವರ ಕೊಡುಗೆಗಳು ಎಂದಿಗೂ ಸ್ಮರಣೀಯ ಎಂದಿದ್ದಾರೆ.

<><><>

ಶಿಕ್ಷಣ ಮತ್ತು ಸಾಮಾಜಿಕ ಸುಧಾರಣೆಗೆ ಶ್ರಮಿಸಿದ ಹೋರಾಟಗಾರ್ತಿ, ದೇಶದ ಪ್ರಥಮ ಮಹಿಳಾ ಶಿಕ್ಷಕಿ ಸಾವಿತ್ರಿಬಾಯಿ ಫುಲೆ ಅವರ ಪುಣ್ಯಸ್ಮರಣೆಯ ದಿನವಾದ ಇಂದು, ಸಚಿವರು ತಮ್ಮ ಎಕ್ಸ್ ಖಾತೆಯ ಮೂಲಕ ಗೌರವ ನಮನಗಳನ್ನು ಸಲ್ಲಿಸಿದ್ದಾರೆ.

<><><>

ಧಾರವಾಡದಲ್ಲಿ ಆಯೋಜಿಸಿದ್ದ, 'ಯುವ ರೋಜಗಾರ್ ಮೇಳ'ದಲ್ಲಿ, 7 ಸಾವಿರದ 550 ಜನ ಉದ್ಯೋಗಾಕಾಂಕ್ಷಿಗಳು, ತಮ್ಮ ಹೆಸರು ನೋಂದಾಯಿಸಿದ್ದರು ಎಂದು, ನವಲಗುಂದ ಶಾಸಕ ಎನ್.ಎಚ್. ಕೋನರಡ್ಡಿ ತಿಳಿಸಿದ್ದಾರೆ. ಕರ್ನಾಟಕ ಕಾಲೇಜು ಆವರಣದಲ್ಲಿ ಜೀವನೋಪಾಯ ಹಾಗೂ ಕೌಶಲಾಭಿವೃದ್ಧಿ ಇಲಾಖೆ ಆಯೋಜಿಸಿದ್ದ, ಉದ್ಯೋಗ ಮೇಳಕ್ಕೆ ಚಾಲನೆ ನೀಡಿ, ಅವರು ಮಾತನಾಡಿದರು.

ಜಿಲ್ಲಾ ಕೌಶಲ ಮಿಷನ್ ಅಧ್ಯಕ್ಷರಾದ ದಿವ್ಯಾ ಪ್ರಭು ಮಾತನಾಡಿ, ಸೂಕ್ತ ಅರ್ಹತೆ ಹೊಂದಿದ ಉದ್ಯೋಗಾಕಾಂಕ್ಷಿಗಳಿಗೆ, ವಿವಿಧ ಸ್ಥಳಗಳಲ್ಲಿ ಉದ್ಯೋಗ ನೀಡಲು, 93 ಕೈಗಾರಿಕೆಗಳು, 20 ಮಾನವ ಸಂಪನ್ಮೂಲ ಸಂಸ್ಥೆಗಳು ಸೇರಿ, 12 ಸಾವಿರದ 145 ಉದ್ಯೋಗಗಳನ್ನು ನೀಡಲು, ಉದ್ಯೋಗ ಮೇಳದಲ್ಲಿ ಭಾಗಿಯಾಗಿದ್ದವು ಎಂದರು.

<><><>

ಕೇಂದ್ರ ರಕ್ಷಣಾ ಖಾತೆ ಸಚಿವ ರಾಜನಾಥ್ ಸಿಂಗ ಅವರು ಬೆಂಗಳೂರಿನ ವಾಯುಯಾನ ವೈದ್ಯಕೀಯ ಸಂಸ್ಥೆ (ಐ.ಎ.ಎಂ) ಹಾಗೂ ಭಾರತೀಯ ವಾಯುಪಡೆ (ಐ.ಎ.ಎಫ್) ಕೇಂದ್ರಕ್ಕೆ ಭೇಟಿ ನೀಡಿದರು. ಈ ಸಂದರ್ಭ ಐ.ಎ.ಎಂ ಪೈಲಟ್ ತರಬೇತಿ ಕೇಂದ್ರದ ವೈದ್ಯಕೀಯ ಪರಿಶೋಧನೆ ಹಾಗೂ ಏರೋಮೆಡಿಕಲ್ ಸಂಶೋಧನೆಗಳ ಬಗ್ಗೆ ಅವರು ಮಾಹಿತಿ ಪಡೆದರು. ಭಾರತದಲ್ಲಿ ವಾಯುಯಾನ ಕ್ಷೇತ್ರದ ಮಾರುಕಟ್ಟೆ ವೃದ್ಧಿಸುತ್ತಿದ್ದು, ವಾಯು ರಕ್ಷಣಾ ಕ್ಷೇತ್ರದಲ್ಲಿ ನುರಿತ ವಾಯುಯಾನ ವೈದ್ಯಕೀಯ ಸಿಬ್ಬಂದಿಗಳ ಅಗತ್ಯವಿದೆ ಎಂದರು.

<><><>

ಅಪರಾಧ ಕೃತ್ಯಗಳನ್ನು ತಡೆಯಲು ಹಾಗೂ ಅಪರಾಧಿಗಳ ಸೆರೆ ಹಿಡಿಯಲು, ಬೀದರ ನಗರದ ಪ್ರಮುಖ ವೃತ್ತಗಳು ಹಾಗೂ ಪ್ರಮುಖ ರಸ್ತೆಗಳಲ್ಲಿ, ಕೃತಕ ಬುದ್ಧಿಮತ್ತೆ ಸಂಚಾಲಿತ, ಸಿ.ಸಿ. ಟಿವಿ ಕ್ಯಾಮೆರಾಗಳನ್ನು ಅಳವಡಿಸಲಾಗಿದೆ ಎಂದು, ಬೀದರ ಜಿಲ್ಲಾ ಉಸ್ತುವಾರಿ ಸಚಿವ ಈಶ್ವರ ಖಂಡ್ರೆ ತಿಳಿಸಿದ್ದಾರೆ. ಕಲ್ಯಾಣ ಕರ್ನಾಟಕ ಪ್ರದೇಶಾಭಿವೃದ್ಧಿ ಮಂಡಳಿ ಹಾಗೂ ಜಿಲ್ಲಾ ಉಸ್ತುವಾರಿ ಸಚಿವರ ಅನುದಾನದಡಿ, 2 ಕೋಟಿ ರೂಪಾಯಿ ವೆಚ್ಚದಲ್ಲಿ, ಬೀದರ್ ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿಗಳ ಕಚೇರಿಯಲ್ಲಿ, ನಿಯಂತ್ರಣ ಕೊಠಡಿ ಸ್ಥಾಪಿಸಲಾಗಿದೆ ಎಂದು, ಸಚಿವ ಖಂಡ್ರೆ ಮಾಹಿತಿ ನೀಡಿದರು.

<><><>

ಇಲ್ಲಿಗೆ ಪ್ರದೇಶ ಸಮಾಚಾರ ಮುಕ್ತಾಯವಾಯಿತು.

ನಮ್ಮ ಮುಂದಿನ ರಾಷ್ಟ್ರೀಯ ವಾರ್ತಾ ಪ್ರಸಾರ 1 ಗಂಟೆ 10 ನಿಮಿಷಕ್ಕೆ..